# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 95 (70) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಎನ್.ರವಿಕುಮಾರ್ |
| ಉತ್ತರಿಸುವ ದಿನಾಂಕ | : | 17-08-2026 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಮತಾಂತರಗೊಂಡ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡವದರಿಗೆ ಮತಾಂತರಗೊಂಡ ಬಳಿಕವೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸೌಲಭ್ಯಗಳನ್ನು ನೀಡಲಾಗುತ್ತಿದೆಯೇ: | ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ THE CONSTITUTION (SCHEUDULED CASTES) ORDER, DATED:-11-08-1950 ಮತ್ತು AMMENDEMENT ACT 1976 Dated:20-09-1976 ಹಾಗೂ ಕೇಂದ್ರ ಸರ್ಕಾರದ NOTIFICATION NO. LAW 58 LCR 77 Bangalore, Dated:03-09-1977 ರಲ್ಲಿ ಕರ್ನಾಟಕ ರಾಜ್ಯಕ್ಕೆ ಸಂಬಂಧಿಸಿದಂತೆ 101 ಪರಿಶಿಷ್ಟ ಜಾತಿಗಳ ಪಟ್ಟಿಯನ್ನು ಹೊರಡಿಸಲಾಗಿರುತ್ತದೆ.<br><br>ಮುಂದುವರೆದು, THE CONSTITUTION (SCHUDULED CASTES) ORDERS (AMENDMENT) ACT 1990 Dated:-04-06-1990 ರನ್ವಯ ಹಿಂದು ಧರ್ಮದ ಜೊತೆಗೆ ಬೌಧ್ಧ ಮತ್ತು ಸಿಖ್ ಧರ್ಮವನ್ನು ಅನುಸರಿಸುತ್ತಿರುವ ಅಧಿಸೂಚಿತ 101 ಪರಿಶಿಷ್ಟ ಜಾತಿಯವರಿಗೆ ಪರಿಶಿಷ್ಟ ಜಾತಿ ಸೌಲಭ್ಯಗಳನ್ನು ಪಡೆಯಲು ಅವಕಾಶ ಕಲ್ಪಿಸಲಾಗಿರುತ್ತದೆ. ಉಳಿದಂತೆ ಇತರೆ ಧರ್ಮಕ್ಕೆ ಮತಾಂತರ ಹೊಂದಿರುವ ಸಮುದಾಯದವರಿಗೆ ಪರಿಶಿಷ್ಟ ಜಾತಿ ಸೌಲಭ್ಯ ಒದಗಿಸಲು ಅವಕಾಶವಿರುವುದಿಲ್ಲ.<br><br>ಪರಿಶಿಷ್ಟ ಪಂಗಡದಿಂದ ಮತಾಂತರಗೊಂಡವರಿಗೆ ಕರ್ನಾಟಕ ಸರ್ಕಾರ, ಸಮಾಜ ಕಲ್ಯಾಣ ಇಲಾಖೆ (ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ) ಮತ್ತು ಕಾರ್ಮಿಕ ಇಲಾಖೆಗೆ ಸಂಬಂಧಿಸಿದಂತೆ ಹೊರಡಿಸಿದ ಸುತ್ತೋಲೆ ಸಂಖ್ಯೆ:SWL 187 SAD 79, ದಿನಾಂಕ:09.11.1979 ಹಾಗೂ ಮೂಲ ಸಂವಿಧಾನ(ಪರಿಶಿಷ್ಟ ಪಂಗಡ) ಆದೇಶ 1950ರಲ್ಲಿ ಇರುವಂತೆ ಪರಿಶಿಷ್ಟ ಪಂಗಡದ ಜನರು ಯಾವುದೇ ಧರ್ಮದಲ್ಲಿ ನಂಬಿಕೆ ಉಳ್ಳವರಾಗಿ ಅದನ್ನು ಪಾಲಿಸಿದ್ದಲ್ಲಿ ಅವರಿಗೆ ಸಂವಿಧಾನ ಬದ್ಧವಾಗಿ ಅನುಚ್ಛೇಧ 15(4) ಮತ್ತು 16(4)ಗಳಲ್ಲಿ ದೊರೆಯುವ ಸೌಲಭ್ಯಗಳು ಮುಂದುವರೆಯುತ್ತವೆ (ಸುತ್ತೋಲೆಯನ್ನು ಲಗತ್ತಿಸಿದೆ). |

| | | |
|---|---|---|
| ಆ) | ರಾಜ್ಯದಲ್ಲಿ ಮತಾಂತರ ನಿಷೇಧ ಕಾನೂನು ಜಾರಿಗೆ ತರುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ ಯಾವಾಗ ಮತಾಂತರ ನಿಷೇಧ ಕಾನೂನು ಜಾರಿಗೆ ತರಲಾಗುವುದು. | ರಾಜ್ಯದಲ್ಲಿ ಕರ್ನಾಟಕ ಮತಾಂತರ ನಿಷೇಧ ಕಾಯ್ದೆಯು (The Karnataka Protection of Right to Freedom of Religion Act, 2022) ಜಾರಿಯಲ್ಲಿರುತ್ತದೆ. |
| ಇ) | ರಾಜ್ಯದಲ್ಲಿ ಕಳೆದ 2 ವರ್ಷಗಳಲ್ಲಿ ಮತಾಂತರಗೊಂಡವರ ಸಂಖ್ಯೆ ಎಷ್ಟು; ಮತಾಂತರಗೊಂಡವರು ಯಾವ ಧರ್ಮದಿಂದ ಯಾವ ಧರ್ಮಕ್ಕೆ ಮತಾಂತರಗೊಂಡಿರುತ್ತಾರೆ? | ಮತಾಂತರಗೊಂಡಿರುವವರ ಬಗ್ಗೆ ಪ್ರಸ್ತುತ ಅಂಕಿ ಅಂಶಗಳನ್ನು ಶೇಖರಿಸುತ್ತಿಲ್ಲ. |

**ಸಕಇ 35 ಆರ್‌ಐಸಿ 2026**

**(ಕೆ.ಹೆಚ್.ಮುನಿಯಪ್ಪ)**
**ಸಮಾಜ ಕಲ್ಯಾಣ ಸಚಿವರು**